ಬೀದರ್ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ ಕಳಪೆ ಮಟ್ಟದ ಕ್ರಿಮಿನಾಶಕ ಮಾರಾಟ

1658 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಬೀದರ್ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ1992 ರಿಂದ ಇಲ್ಲಿಯವರೆಗೆ ಕಳಪೆ ಗುಣಮಟ್ಟದ ಕ್ರಿಮಿನಾಶಕಗಳನ್ನು ಮಾರಾಟ ಮಾಡಿದ ಬಗ್ಗೆ ಎಷ್ಟು ಜನರ ಮೇಲೆ ಪ್ರಕರಣಗಳನ್ನು ದಾಖಲೆ ಮಾಡಲಾಗಿದೆ?*

2. *ಅವುಗಳಲ್ಲಿ ಎಷ್ಟು ಪ್ರಕರಣಗಳು ನಿಖಾಲೆ ಆಗಿವೆ. ಎಷ್ಟು ಚಾಲ್ತಿಯಲ್ಲಿ ಇವೆ. ಎಷ್ಟು ಜನರಿಗೆ ಶಿಕ್ಷೆ, ದಂಡ ಆಗಿವೆ?*

3. *ಯಾವುದು ಪ್ರಕರಣಗಳಲ್ಲಿ ಶಿಕ್ಷೆ, ದಂಡ ಆಗಿದೆ. ಇದ್ದಲ್ಲಿ ಅದಕ್ಕೆ ಕಾರಣಗಳೇನು?*

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು) :

1. ಬೀದರ್ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ 1992 ರಿಂದ 1997-98ನೇ ಸಾಲಿನವರೆಗೆ ಕಳಪೆ ಗುಣಮಟ್ಟದ ಕ್ರಿಮಿನಾಶಕಗಳನ್ನು ಮಾರಾಟ ಮಾಡಿದ ಬಗ್ಗೆ ಒಟ್ಟು 162 ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ಮೊಕ್ಕದ್ದಮೆ ಹೂಡಲಾಗಿದೆ.

2. ನ್ಯಾಯಾಲಯದಲ್ಲಿ ಮಾಡಲಾದ ಮೊಕ್ಕದಮೆಗಳಲ್ಲಿ 6 ಪ್ರಕರಣಗಳು ನಿಖಾಲೆ ಆಗಿವೆ. 156 ಪ್ರಕರಣಗಳು ಚಾಲ್ತಿಯಲ್ಲಿ ಇವೆ. 5 ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ.

3. ಒಂದು ಪ್ರಕರಣದಲ್ಲಿ ಮಾತ್ರ ಶಿಕ್ಷೆ, ದಂಡ ಆಗಿಲ್ಲದಿರುವುದು ಕಂಡುಬಂದಿದೆ.

ಹುಬ್ಬಳ್ಳಿ ಮಹಾನಗರ ವ್ಯಾಪ್ತಿಯಲ್ಲಿ ಬರುವ ಕೆಲವು ಪ್ರದೇಶವನ್ನು ಕೊಳಚೆ ಪ್ರದೇಶವೆಂದು ಘೋಷಣೆ ಮಾಡುವುದು

1659 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ, ಮಹಾನಗರದ ವ್ಯಾಪ್ತಿಯಲ್ಲಿ ಬರುವ ಬೆಂಗೇರಿ ಭಾಗದ ಉದಯನಗರದ 'ಹೂಗಾರ ತೋಟ' ಪ್ರದೇಶವನ್ನು ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಅಡಿಯಲ್ಲಿ ಕೊಳಚೆ ಪ್ರದೇಶವೆಂದು ಘೋಷಣೆ ಹೊರಡಿಸುವ ಕ್ರಮ ಯಾವ ಹಂತದಲ್ಲಿ ಇದೆ, ಯಾವಾಗ ಘೋಷಿಸಲಾಗುವುದು?*

ಶ್ರೀ ಹೆಚ್.ಡಿ. ರೇವಣ್ಣ (ವಸತಿ ಸಚಿವರು) :

ಅ) ಈ ಪ್ರದೇಶದ ಘೋಷಣೆಗೆ ಸಂಬಂಧಿಸಿದ ಪ್ರಸ್ತಾವನೆಯ ಪೈಕಿ ಹುಬ್ಬಳ್ಳಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿರಾಪೇಕ್ಷಣಾ ಪತ್ರ ಬರಬೇಕಿರುತ್ತದೆ. ನಿರಾಪೇಕ್ಷಣಾ ಪತ್ರವನ್ನು ಕಳುಹಿಸಿಕೊಡುವಂತೆ ಕೋರಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ದಿನಾಂಕ 28.7.97 ಮತ್ತು 18.11.97ರಂದು ಪತ್ರ ಬರೆದು